ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,
ತರೀಕೆರೆ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 2835/2022

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರು ಃ

1) ತೇಜಸ್ ಬಿನ್ ಶೇಖರಪ್ಪ, 23 ವರ್ಷ, ವ್ಯವಸಾಯಗಾರರು,
2) ಗಿರೀಶ ಬಿನ್ ಹನುಮಂತಪ್ಪ, 23 ವರ್ಷ, ಕೂಲಿಕೆಲಸ,
3) ಮಂಜುನಾಥ ಬಿನ್ ರಾಜಣ್ಣ, 28 ವರ್ಷ, ಕೂಲಿಕೆಲಸ,

ಆ-1 ರಿಂದ 3 ವಾಸಃ ನಂದಿಹೊಸಳ್ಳಿ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

4) ಗಗನ.ಟಿ.ಎಲ್. ಬಿನ್ ಲೋಕೇಶ, 21 ವರ್ಷ, ಚಾಲಕ ವೃತ್ತಿ, ವಾಸಃ ಅಂಬೇಡ್ಕರ್ ನಗರ, ಎಂ.ಜಿ.ರಸ್ತೆ, ತರೀಕೆರೆ.

****

## ದೋಷಾರೋಪಣೆ

ಶ್ರೀಮತಿ ಊರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 14.09.2021 ರಂದು ಸಂಜೆ 07.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ನಂದಿಹೊಸಳ್ಳಿ ಗ್ರಾಮದ ಗಣಪತಿ ವಿಸರ್ಜನೆ ಮಾಡುವ ವಿಚಾರದಲ್ಲಿ, ಲಿಂಗದಹಳ್ಳಿ-ತರೀಕೆರೆ ರಸ್ತೆಯಲ್ಲಿ ಭಗವತಿಕಟ್ಟೆ ಕೆರೆಯ ಹತ್ತಿರ ತರೀಕೆರೆ ಕಡೆಯಿಂದ ಕೆಎಃ66/1726 ನೇ ಟಾಟಾ ಏಸ್ ವಾಹನದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಬಂದು, ಚಾಸಾ-1 ಕಿರಣ್ ಹಾಗೂ ಚಾಸಾ-8 ರಿಂದ 12 ರವರನ್ನು ಅಡ್ಡಗಟ್ಟಿ ನಿಲ್ಲಿಸಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ತನ್ನ ನೆಚ್ಚಿನ ನಟನಾದ ಸುದೀಪನ ಬಗ್ಗೆ ಮಾತನಾಡುತ್ತೀಯಾ ಸೂಳೆಮಗನೇ ಎಂದು ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ಚಾಸಾ-1 ರವರ ಕೊರಳಪಟ್ಟಿ ಹಿಡಿದು ಎಳೆದಾಡಿ, ನೀವು ತಂದಿದ್ದ ಒಂದು ಕಬ್ಬಿಣದ ಮಚ್ಚಿನಿಂದ ಹೊಡೆದಿದ್ದು, ಕಿರಣನು ಕೈ ಅಡ್ಡ ಹಿಡಿದಿದ್ದರಿಂದ ಅವರ ಬಲದೇ ಕೈ ಹಸ್ತಕ್ಕೆ ಪೆಟ್ಟು ಬಿದ್ದು ರಕ್ತಗಾಯವಾಗಿದ್ದು, ಬಿಡಿಸಲು ಬಂದ ಚಾಸಾ-8 ರವರಿಗೆ 2 ನೇ ಆರೋಪಿಯಾದ ನೀವು 1 ನೇ ಆರೋಪಿಯ ಕೈಯಲ್ಲಿದ್ದ ಮಚ್ಚನ್ನು ಕಿತ್ತುಕೊಂಡು ಹೊಡೆದಿದ್ದು, ಚಾಸಾ-8 ರವರು ಕೈ ಅಡ್ಡ ಹಿಡಿದಿದ್ದರಿಂದ ಅವರ ಎಡದೇ ಕೈಗೆ ಪೆಟ್ಟಾಗಿ ರಕ್ತಗಾಯವಾಗಿ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಬಿಡಿಸಲು ಬಂದ ಚಾಸಾ-8 ರವರಿಗೆ ಕೈಯಿಂದ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, 2 ರಿಂದ 4 ನೇ ಆರೋಪಿತರಾದ ನೀವು 1 ನೇ ಆರೋಪಿಯ ವಿಚಾರಕ್ಕೆ ಬಂದರೆ ಕೊಲೆ ಮಾಡುವುದಾಗಿ ಚಾಸಾ-1, 8 ರಿಂದ 12 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 19.08.2025

ಸಹಿ
**(ಉರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.